# ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಸಿ ಎನ್ ಮಂಜೇಗೌಡ ರವರು ಶೂನ್ಯ ವೇಳೆಯಲ್ಲಿ ಮಂಡಿಸಿರುವ ಪ್ರಶ್ನೆಗೆ ಉತ್ತರ

ಪ್ರಶ್ನೆ: ಕೇಂದ್ರಸರ್ಕಾರದ ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ(ಮನರೇಗಾ) ರಾಜ್ಯದಲ್ಲಿ ಒಂದೇ ವರ್ಷದಲ್ಲಿ ರೂ. 669.92 ಕೋಟಿ ದುರ್ಬಳಕೆ ಆಗಿರುವುದು ಸಾಮಾಜಿಕ ಲೆಕ್ಕ ಪರಿಶೋಧನಾ ವರದಿಯಿಂದ ಪತ್ತೆಯಾಗಿರುವ ವಿಷಯ ವಿಜಯವಾಣಿ ಪತ್ರಿಕೆಯಲ್ಲಿ ವರದಿಯಾಗಿರುತ್ತದೆ.

ರಾಜ್ಯದಲ್ಲಿ, ನಿರುದ್ಯೋಗ ಸಮಸ್ಯೆ ಹೋಗಲಾಡಿಸಲು ಹಾಗೂ ಗ್ರಾಮೀಣ ಭಾಗಗಳಲ್ಲಿ ದುಡಿಯುವ ಕಾರ್ಮಿಕರಿಗೆ ಕೆಲಸ ಒದಗಿಸುವ ಉದ್ದೇಶದಿಂದ 2013-14ನೇ ಸಾಲಿನಿಂದ ನರೇಗಾ ಯೋಜನೆ ಜಾರಿಗೊಳಿಸಲಾಗಿದೆ. ರಾಜ್ಯದ 31 ಜಿಲ್ಲೆಗಳ ಗ್ರಾಮ ಪಂಚಾಯಿತಿ ಹಾಗೂ ಅನುಷ್ಠಾನ ಇಲಾಖೆಗಳಲ್ಲಿ 2022-23ನೇ ಸಾಲಿನ ಲೆಕ್ಕ ಪರಿಶೀಲನೆ ನಡೆಸಿದ್ದ ಪರಿಶೋಧಕರು ಹಣ ದುರುಪಯೋಗವಾಗಿರುವುದನ್ನು ದಾಖಲೆ ಸಮೇತ ಪತ್ತೆ ಮಾಡಿರುವುದು ತಿಳಿದುಬಂದಿರುತ್ತದೆ. ಕಾಮಗಾರಿ ಮಾಡದೇ ಕೂಲಿ ಹಣ ಪಾವತಿ ಮಾಡಿರುವುದು, ಯೋಜನೆಗೆ ಮೀಸಲಿಟ್ಟ ಹಣವನ್ನು ಮೀರಿ ಹೆಚ್ಚುವರಿ ಹಣ ಪಾವತಿಸಿರುವುದು, ಯೋಜನೆಗೆ ಮೀಸಲಿಟ್ಟ ಹಣವನ್ನು ಮೀರಿ ಹೆಚ್ಚುವರಿ ಹಣ ಪಾವತಿಸಿರುವುದು, ಬೇರೆ ಯೋಜನೆಗಳಿಗೆ ನರೇಗಾ ಹಣ ನೀಡಿರುವುದು, ಸತ್ತವರ ಹೆಸರಿನಲ್ಲೂ, ಕೂಲಿ ಪಾವತಿಸಿರುವಂಥ ದೋಷಗಳು ಕಂಡುಬಂದಿರುತ್ತವೆ. ಇದರೊಂದಿಗೆ ಹಲವು ಕಾಮಗಾರಿಗಳಿಗೆ ಸಂಬಂಧಿಸಿದ ಕಡತಗಳನ್ನು ಒದಗಿಸದೇ ಲೋಪ ಎಸಗಿಲಾಗಿದೆ.

2013 ರಿಂದ 2014ನೇ ಸಾಲಿನಿಂದ 2022-23ನೇ ಸಾಲಿನವರೆಗೆ ಕೈಗೊಂಡಿರುವ ಕಾಮಗಾರಿಗಳ ಕೂಲಿ ಮೊತ್ತದಲ್ಲಿ ಸುಮಾರು ರೂ. 4500 ಕೋಟಿ ಮೊತ್ತಕ್ಕೆ ಯಾವುದೇ ದಾಖಲೆ ಸಲ್ಲಿಕೆಯಾಗದಿರುವುದನ್ನು ಸಹ ಪತ್ರಿಕೆ ಉಲ್ಲೇಖಿಸಿರುತ್ತದೆ. ಹಣ ದುರುಪಯೋಗವಾಗಿರುವುದನ್ನು ವಸೂಲಿ ಮಾಡಲು ಕ್ರಮ ಜರುಗಿಸುವಂತೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಆಯುಕ್ತರು ಸೂಚಿಸಿ ನಾಲ್ಕು ತಿಂಗಳು ಕಳೆದಿದ್ದರೂ ಹಣ ವಸೂಲಾತಿಗೆ ಸಿ.ಇ.ಒ.ಗಳು ಕ್ರಮ ಜರುಗಿಸದಿರುವುದು ಹಲವು ಅನುಮಾನಗಳಿಗೆ ಕಾರಣವಾಗಿರುತ್ತದೆ. ದುರುಪಯೋಗವಾದ ಹಣವನ್ನು ವಸೂಲಿ ಮಾಡಲು ಜಿಲ್ಲಾಮಟ್ಟದಲ್ಲಿ ವಸೂಲಾತಿ ಕೋಶ ರಚಿಸಬೇಕೆಂಬ ನಿಯಮವಿದ್ದರೂ ಬಹುತೇಕ ಜಿಲ್ಲೆಗಳಲ್ಲಿ ಈ ಕೋಶ ನಿಷ್ಕ್ರಿಯಗೊಂಡಿದ್ದು ವಸೂಲಿ ಪ್ರಕ್ರಿಯೆ ವಿಳಂಬವಾಗುತ್ತಿದೆ.

ಒಟ್ಟಾರೆ ಸರ್ಕಾರದ 9 ಇಲಾಖೆಗಳಲ್ಲಿ ನರೇಗಾ ಹಣ ದುರ್ಬಳಕೆಯಾಗಿರುವುದು ಕಂಡುಬಂದಿದ್ದು, ಸರ್ಕಾರ ದುರ್ಬಳಕೆ ಆಗಿರುವ ಹಣ ವಸೂಲಿಸಲು ಒಂದು ವಿಶೇಷ ಸಮಿತಿ ರಚನೆ ಮಾಡಬೇಕು ಹಾಗೂ ಹಣ ದುರುಪಯೋಗಕ್ಕೆ ಕಾರಣರಾದವರ ಮೇಲ ಶಿಸ್ತು ಕ್ರಮ ಕೈಗೊಳ್ಳಬೇಕೆಂದು ಶೂನ್ಯವೇಳೆಯಲ್ಲಿ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರನ್ನು ಒತ್ತಾಯಿಸುತ್ತೇನೆ.

ಉತ್ತರ: ರಾಜ್ಯದಲ್ಲಿ ಸಾಮಾಜಿಕ ಪರಿಶೋಧನಾ ನಿರ್ದೇಶನಾಲಯವು 2013-14ನೇ ಸಾಲಿನಿಂದ ಅಸ್ತಿತ್ವಕ್ಕೆ ಬಂದಿದ್ದು, ಪ್ರಾರಂಭದ ಹಂತದಲ್ಲಿ ಸಾಮಾಜಿಕ ಪರಿಶೋಧನೆಯು ಪೂರ್ಣ ಪ್ರಮಾಣದಲ್ಲಿ ನಡೆದಿರುವುದಿಲ್ಲ. ಸಾಮಾಜಿಕ ಪರಿಶೋಧನಾ ನಿರ್ದೇಶಕರು 2013-14ನೇ ಸಾಲಿನಿಂದ 2022-23ನೇ ಸಾಲಿನ ವರೆಗಿನ ಸಾಮಾಜಿಕ ಪರಿಶೋಧನೆಯನ್ನು ನಡೆಸಿ ಸಲ್ಲಿಸಲಾದ ವರದಿಯಲ್ಲಿ ರಾಜ್ಯದ 31 ಜಿಲ್ಲೆಗಳಲ್ಲಿ ಒಟ್ಟು ರೂ.456.22 ಕೋಟಿಗಳನ್ನು ವಸೂಲಾತಿಗೆ ಹಾಗೂ ರೂ.4363.63ಕೋಟಿಗಳು (ಸಾಮಾಜಿಕ ಪರಿಶೋಧನೆಗೆ ಕಡತ ಒದಗಿಸದೇ ಇರುವ ಪ್ರಕರಣಗಳನ್ನೊಳಗೊಂಡಂತೆ) ಆಕ್ಷೇಪಣಾ ಮೊತ್ತವೆಂದು ದಾಖಲಿಸಿರುತ್ತಾರೆ. ವರದಿಯಲ್ಲಿ ಕಾಮಗಾರಿ ನಿರ್ವಹಿಸದೆ ಪಾವತಿ ಮಾಡಿರುವ, ಹೆಚ್ಚುವರಿ ಪಾವತಿ, ಮರಣ/ಕೂಲಿ ಮಾಡಿದವರ ಹೆಸರಿನಲ್ಲಿ ಪಾವತಿ ಮಾಡಿರುವುದು, ಕೆಲಸ ಮಾಡದೆ/ಮದುವೆಯಾಗಿ ಬೇರೆ ಕಡೆ ವಾಸವಿರುವವರ ಹೆಸರಿನಲ್ಲಿ ಕೂಲಿ ಪಾವತಿ, ಯೋಜನೆಯಡಿ ಅವಕಾಶವಿರದ ಕಾಮಗಾರಿ, ಕಳಪೆ ಮತ್ತು ಯಂತ್ರಬಳಕೆ ಹಾಗೂ ವಿವಿಧ ದೋಷಗಳಿಂದ ಹಣ ಪಾವತಿಸಿರುವ ಪ್ರಕರಣಗಳು ವರದಿಯಲ್ಲಿ ಒಳಗೊಂಡಿರುತ್ತದೆ.

ಸಾಮಾಜಿಕ ಪರಿಶೋಧನೆ ತಂಡಕ್ಕೆ ಕಾಮಗಾರಿ ಅನುಷ್ಠಾನಕ್ಕೆ ಸಂಬಂಧಿಸಿದ ಅಗತ್ಯ ದಾಖಲೆಗಳನ್ನು ಗ್ರಾಮ ಪಂಚಾಯಿತಿ ಹಾಗೂ ಅನುಷ್ಠಾನ ಇಲಾಖೆಯ ಅಧಿಕಾರಿಗಳು ಪರಿಶೋಧನೆ ನಡೆಯುವ ಸಂದರ್ಭದಲ್ಲಿ ಒದಗಿಸದೇ ಇರುವ ಕಾರಣದಿಂದಾಗಿ ವಸೂಲಾತಿ ಮೊತ್ತ ಹಾಗೂ ಆಕ್ಷೇಪಣಾ ಮೊತ್ತದ ಗಾತ್ರ ದೊಡ್ಡದಾಗಿರುತ್ತದೆ. ಸಾಮಾಜಿಕ ಪರಿಶೋಧನಾ ವರದಿಯಲ್ಲಿ ನಮೂದಿಸಲಾದ ಪ್ರಕರಣಗಳ ಬಗ್ಗೆ ಪರಿಶೀಲಿಸಿ ವಸೂಲಾತಿಯಿಂದ ಕೈಬಿಡುವ /ವಸೂಲಾತಿ ಮಾಡುವ ಮೊತ್ತದ ಬಗ್ಗೆ ನಿರ್ಣಯಿಸಿ ನಡವಳಿಯೊಂದಿಗೆ ಸೂಕ್ತ ಪ್ರಸ್ತಾವನೆಯನ್ನು ಗ್ರಾಮ ಸಭೆಗೆ ಮಂಡಿಸಲು ತಾಲ್ಲೂಕು ಮಟ್ಟದಲ್ಲಿ ಕಾರ್ಯನಿರ್ವಾಹಕ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ಅಡ್‌ಹಾಕ್ ಸಮಿತಿಯನ್ನು ರಚಿಸಲಾಗಿದೆ.

ನರಗಾ ಯೋಜನೆಯಡಿ ಸಾಮಾಜಿಕ ಪರಿಶೋಧನಾ ವರದಿಯಲ್ಲಿ ವಿವಿಧ ಪ್ರಕರಣಗಳಲ್ಲಿ ವಸೂಲಾತಿಗೆ ಸೂಚಿಸಲಾದ ಮೊತ್ತವನ್ನು ವಸೂಲಿ ಮಾಡಲು ಕ್ರಮವನ್ನು ತ್ವರಿತಗೊಳಿಸುವ ಉದ್ದೇಶದಿಂದ ಜಿಲ್ಲಾ ಮಟ್ಟದಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್ ಇವರ ಅಧ್ಯಕ್ಷತೆಯಲ್ಲಿ "ಸಾಮಾಜಿಕ ಪರಿಶೋಧನೆ ಮತ್ತು ಒಂಬುಡ್ಸ್‌ಪರ್ಸನ್ ವರದಿಗಳ ಅನುಪಾಲನಾ ಮೇಲ್ವಿಚಾರಣಾ ಸಮಿತಿ"ಯನ್ನು ಅಧಿಕೃತ ಜ್ಞಾಪನ ಸಂ:ಆರ್‌ಡಿಪಿ:69:ಇಜಿಎಸ್:2020 ದಿನಾಂಕ:28.10.2021ರಲ್ಲಿ ರಚಿಸಲಾಗಿದ್ದು, ಸದರಿ ಸಮಿತಿಯು ಸಾಮಾಜಿಕ ಪರಿಶೋಧನೆಯ ವಸೂಲಾತಿ ಮತ್ತು ಆಕ್ಷೇಪಣಾ ಕಂಡಿಕೆಗಳನ್ನು ತಾಲ್ಲೂಕು ಮಟ್ಟದ ಸಮಿತಿಯು ತಿರುವಳಿ ಮಾಡಿರುವ ಪ್ರಗತಿಯ ಕುರಿತು ಪರಿಶೀಲನೆ ನಡೆಸುವುದಲ್ಲದೆ ವಸೂಲಾತಿಗೆ ಆದೇಶಿಸಲಾದ ಮೊತ್ತವನ್ನು ನಿಗದಿಪಡಿಸಿದ ಅವಧಿಯೊಳಗೆ ವಸೂಲಿ ಮಾಡಲು ವಿಫಲರಾದ ಅಧಿಕಾರಿ/ಸಿಬ್ಬಂದಿಗಳ ವಿರುದ್ಧ ಶಿಸ್ತುಕ್ರಮವನ್ನು ಪ್ರಾರಂಭಿಸುವ ಜವಾಬ್ದಾರಿಯಾಗಿರುತ್ತದೆ.

ಸಾಮಾಜಿಕ ಲೆಕ್ಕಪರಿಶೋಧನಾ ವರದಿಯ ಮೇಲೆ ತೆಗೆದುಕೊಂಡ ಕ್ರಮಗಳ ಮೇಲ್ವಿಚಾರಣೆಯನ್ನು ವಿವಿಧ ಹಂತಗಳಲ್ಲಿ ನಿಯಮಿತವಾಗಿ ಮಾಡಲಾಗುತ್ತಿದೆ. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ, RDPR ಅವರಿಂದ ಜಿಲ್ಲಾ ಕಾರ್ಯಕ್ರಮ ಸಂಯೋಜಕರಿಗೆ (DPC) ಮಾಸಿಕ ಪರಿಶೀಲನೆ ನಡೆಸಲಾಗುತ್ತಿದೆ. ಗ್ರಾಮೀಣಾಭಿವೃದ್ಧಿ ಆಯುಕ್ತರಿಂದ ನರೇಗಾ ಅನುಷ್ಠಾನದಲ್ಲಿ ತೊಡಗಿರುವ ಜಿಲ್ಲಾ ನೋಡಲ್ ಅಧಿಕಾರಿಗಳು, ಬ್ಲಾಕ್ ಕಾರ್ಯಕ್ರಮ ಅಧಿಕಾರಿಗಳು ಮತ್ತು ಇತರ ಅಧಿಕಾರಿಗಳಿಗೆ ವಾರಕ್ಕೊಮ್ಮೆ ವಿಡಿಯೋ ಸಂವಾದದ ಮೂಲಕ ಸಲಹೆ ಸೂಚನೆಗಳನ್ನು ನೀಡಲಾಗುತ್ತದೆ.

ಜಿಲ್ಲಾ ಮಟ್ಟದಲ್ಲಿ ಜಿಲ್ಲಾ ಕಾರ್ಯಕ್ರಮ ಸಂಯೋಜಕರಿಂದ ಸಾಪ್ತಾಹಿಕ ಪರಿಶೀಲನೆ ನಡೆಸಲಾಗುತ್ತಿದೆ. ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಯಿಂದ ತಾಲ್ಲೂಕು ಮಟ್ಟದಲ್ಲಿ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳೊಂದಿಗೆ ಸಾಪ್ತಾಹಿಕ ಪರಿಶೀಲನೆ ನಡೆಸಲಾಗುತ್ತಿದೆ. ಮೊತ್ತದ ದುರುಪಯೋಗದಲ್ಲಿ ಭಾಗಿಯಾಗಿರುವ ವಿವಿಧ ವೃಂದಗಳಿಗೆ ವಸೂಲಾತಿಯ ಶೇಕಡಾವಾರು ಪ್ರಮಾಣವನ್ನು ನಿಗದಿಪಡಿಸಿ ಸರ್ಕಾರಿ ಸುತ್ತೋಲೆ ಸಂ:RDP:120:EGS:2019 ದಿನಾಂಕ04.01.2020 ರಂದು ಹೊರಡಿಸಲಾಗಿದೆ. ಸಾರ್ವಜನಿಕರಿಂದ ಸ್ವೀಕರಿಸಿದ ದೂರುಗಳ ಮೇಲೆ ನಿಯಮಿತವಾಗಿ ಕ್ರಮ ಕೈಗೊಳ್ಳಲು ಜಿಲ್ಲಾ ಮಟ್ಟದಲ್ಲಿ ಒಂಬುಡ್ಸ್‌ಪರ್ಸನ್ ಕ್ರಮ ಕೈಗೊಳ್ಳುತ್ತಾರೆ. ನರೇಗಾ ಯೋಜನೆಯಡಿಯಲ್ಲಿ ಅನುಷ್ಠಾನಗೊಂಡ ಕಾಮಗಾರಿಗಳ ತಪಾಸಣೆಗಾಗಿ ರಾಜ್ಯ ಮಟ್ಟದ ಅಧಿಕಾರಿಗಳು ಗ್ರಾಮ ಪಂಚಾಯತ್‌ಗೆ ಭೇಟಿ ನೀಡುವ ಜವಾಬ್ದಾರಿ ವಹಿಸಲಾಗಿದೆ. SQM ಮತ್ತು DQM ನಿಯಮಿತವಾಗಿ ಅನುಷ್ಠಾನಗೊಂಡ ಕಾಮಗಾರಿಗಳ ಗುಣಮಟ್ಟವನ್ನು ಪರಿಶೀಲಿಸುತ್ತಾರೆ.

ನರೇಗಾ ಯೋಜನೆಯಡಿ ಅನುಷ್ಠಾನಗೊಂಡ ಕಾಮಗಾರಿಗಳಲ್ಲಿ ಮೊದಲ ಸಹಿದಾರರಿಂದ ಸಾಮಗ್ರಿ ಮೊತ್ತವನ್ನು ಪಾವತಿಸುವ ಮೊದಲು ದಾಖಲೆಗಳ 100% ಪರಿಶೀಲನೆ ಮತ್ತು ಸ್ಥಳ ಭೇಟಿ ನಡೆಸಲಾಗುತ್ತದೆ. ಸರ್ಕಾರಿ ಹಣ ದುರುಪಯೋಗಪಡಿಸಲು ಕಾರಣರಾದ ಸರ್ಕಾರಿ ನೌಕರರು/ ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮಗಳನ್ನು ಪ್ರಾರಂಭಿಸಲಾಗಿದೆ. ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯ ನಿಯಮಗಳು-2011, ನಿಯಮ-7(3)(F) ರಡಿಯಲ್ಲಿ ಹೊರಗುತ್ತಿಗೆ ನೌಕರರು ದುರುಪಯೋಗಪಡಿಸಿಕೊಂಡ ಮೊತ್ತವನ್ನು ಮರುಪಡೆಯಲು ಕ್ರಮ ಕೈಗೊಳ್ಳಲಾಗಿದೆ. ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಕಾಯ್ದೆಯಡಿ ಗ್ರಾಮ ಪಂಚಾಯತ್‌ಗಳ ಸದಸ್ಯರು ಮತ್ತು ಅಧ್ಯಕ್ಷರ ವಿರುದ್ಧ ಕ್ರಮ ಕೈಗೊಳ್ಳಲಾಗುತ್ತಿದ್ದು, ವಿಚಾರಣಾ ವರದಿಯ ಮೇಲೆ ದುರುಪಯೋಗದ ಮೊತ್ತವನ್ನು ವಸೂಲಿ ಮಾಡುವ ಕ್ರಮ ಕೈಗೊಳ್ಳಲಾಗುತ್ತಿರುವುದಲ್ಲದೆ ಕ್ರಿಮಿನಲ್ ಮೊಕದ್ದಮೆ ದಾಖಲಿಸಲಾಗುತ್ತಿದೆ. ಸಾಮಾಜಿಕ

ಪರಿಶೋಧನೆಗೆ ಕಡತ ಒದಗಿಸದಿರುವ ಪ್ರಕರಣಗಳಲ್ಲಿ ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ಸರ್ಕಾರದ ಸುತ್ತೋಲೆ ಸಂ:ಗ್ರಾಅಪ 60 ಜಿಪಾ 2024 ದಿನಾಂಕ: 05.06.2024ರಲ್ಲಿ ಸೂಚನೆ ನೀಡಲಾಗಿದ್ದು, ಸದರಿ ಸೂಚನೆಯಲ್ಲಿ ಕಡತ ಒದಗಿಸಲು ವಿಫಲರಾದ ಗ್ರಾಮ ಪಂಚಾಯಿತಿಯ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ಹಾಗೂ ಅನುಷ್ಠಾನ ಇಲಾಖೆಯ ಅಧಿಕಾರಿಗಳಿಗೆ ದಂಡನೆ ನಿಗದಿಪಡಿಸಲಾಗಿದೆ.

ಸಾಮಾಜಿಕ ಪರಿಸೋಧನಾ ವರದಿಯಲ್ಲಿನ ಪ್ರಕರಣಗಳಲ್ಲಿ ತಾಲ್ಲೂಕು ಮಟ್ಟದ ಕಾರ್ಯನಿರ್ವಾಹಕ ಅಧಿಕಾರಿಗಳು ಅಡ್‌ಹಾಕ್ ಸಮಿತಿಯು ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸಲು ವಿಫಲರಾದ ಬಗ್ಗೆ ಸೂಚನೆ ನೀಡಲು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಸರ್ಕಾರವು ಸೂಚನೆಗಳನ್ನು ನೀಡಿದೆ. ಸರ್ಕಾರದ ಆದೇಶದಂತೆ ಅಡ್‌ಹಾಕ್ ಸಮಿತಿಯನ್ನು ನಿಯಮಿತವಾಗಿ ಸಭೆಯನ್ನು ನಡೆಸುವಲ್ಲಿ ವಿಫಲರಾದ 73 ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಶೋಕಾಸ್ ನೋಟಿಸ್ ನೀಡಲಾಗಿದೆ. ರಾಯಚೂರು ಜಿಲ್ಲೆಯ ದೇವದುರ್ಗ ತಾಲ್ಲೂಕಿನ 33 ಗ್ರಾಮ ಪಂಚಾಯಿತಿಯಲ್ಲಿ ನಡೆದಿದೆ ಎನ್ನಲಾದ ಅವ್ಯವಹಾರದ ಬಗ್ಗೆ ವಿಶೇಷ ಸಾಮಾಜಿಕ ಪರಿಶೋಧನೆ ನಡೆಸಿ, ಅವ್ಯವಹಾರದಲ್ಲಿ ಭಾಗಿಯಾಗಿದ್ದ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ಹಾಗೂ ಸಹಾಯಕ ನಿರ್ದೇಶಕು (ಗ್ರಾಉ) ಹಾಗೂ ಕಾರ್ಯನಿರ್ವಾಹಕ ಅಧಿಕಾರಿಗಳನ್ನು ಅಮಾನತ್ತಿನಲ್ಲಿಟ್ಟು ನಂತರ ತೆರವುಗೊಳಿಸಿ ಸಂಬಂಧಿಸಿದ ಪ್ರಾಧಿಕಾರಿಗಳು ಶಿಸ್ತು ಕ್ರಮ ಪ್ರಾರಂಭಿಸಿರುತ್ತಾರೆ.

ಸಾಮಾಜಿಕ ಪರಿಶೋಧನಾ ವರದಿಯಲ್ಲಿ ಗುರುತಿಸಲಾದ ಅವ್ಯವಹಾರದ ಪ್ರಕರಣಗಳನ್ನು ತಾಲ್ಲೂಕು ಅಡ್‌ಹಾಕ್ ಸಮಿತಿಯು ವಿಚಾರಣೆ ನಡೆಸಿ ಇದುವರೆಗೆ ರೂ.38.41ಕೋಟಿಗಳನ್ನು ವಸೂಲಾತಿ ಮಾಡಲಾಗಿದೆ. ಉಳಿದ ಪ್ರಕರಣಗಳ ಬಗ್ಗೆ ಇತ್ಯರ್ಥಪಡಿಸಲು ತಾಲ್ಲೂಕು ಪಂಚಾಯಿತಿಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ.

**ಸಂಖ್ಯೆ: ಗ್ರಾಅಪ/121(10)/ಉಖಾಯೋ/2025**

**(ಪ್ರಿಯಾಂಕ್ ಖರ್ಗೆ)**
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.